# ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

# कर्नाटक-संस्कृत-विश्वविद्यालयः

श्री चामराजेन्द्र संस्कृत महाविद्यालयस्य परिसरः
पम्पमहाकविमार्गः, चामराजपेटे, बेङ्गलूरु – ५६००१८.


ಸಂಖ್ಯೆ: ಕಸಂವಿ/ಪ್ರ.ಸ./2017–18/572-25 ದಿನಾಂಕ: 03.02.2018

ಮಾನ್ಯರೇ,

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ನಲವತ್ತಮೂರನೆಯ** (ವಿಶೇಷ) ಸಭೆಯು ದಿನಾಂಕ: **03.02.2018ರ ಶನಿವಾರ ಪೂರ್ವಾಹ್ನ 11.00 ಗಂಟೆಗೆ** ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳು ವಹಿಸಿದ್ದರು. ಈ ಪತ್ರದೊಂದಿಗೆ ಆ ದಿನ ನಡೆದ ಸಭೆಯ ನಡಾವಳಿಯನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡಲಾಗಿದೆ.

ಈ ಸಭೆಯ ನಡಾವಳಿಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪತ್ರ ತಲುಪಿದ ದಿನಾಂಕದಿಂದ ಹತ್ತು ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

Sd/-
**ಕುಲಸಚಿವರು**

ಕುಲಸಚಿವರು
ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಬೆಂಗಳೂರು – 560 018

ಇವರಿಗೆ,

1. **ಶ್ರೀಮತಿ ಸುಜಾತ ಗೌಡ**, # 30, 7ನೇ ಹಂತ, 2ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ಮೈಲಸಂದ್ರ, ಕೆಂಗೇರಿ, ಬೆಂಗಳೂರು – 560059.
2. **ಶ್ರೀ ಶಿವಕುಮಾರ್ ಎನ್.**, # 109, 2ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಪಾಂಡುರಂಗ ಬಡಾವಣೆ, ಅರಕೆರೆ ಗೇಟ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560076.
3. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ರಾಮಪುರ, ರಬಕವಿ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
4. **ಪ್ರೊ. ಮೈಕೆಲ್**, ಸಂಸ್ಕೃತ ಪ್ರಾಧ್ಯಾಪಕರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಜ್ಞಾನಗಂಗಾ, ಕಲಬುರಗಿ–585106.
5. **ಶ್ರೀಮತಿ ಜಯಶ್ರೀ ವಿ. ಕೊರತಿ**, ಕೆನರಾ ವೆಲ್‌ಫ್ಲೇರ್ ಟ್ರಸ್ಟ್ ಎಜುಕೇಷನ್ ಕಾಲೇಜು, ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ – 581325
6. **ವಿದ್ವಾನ್ ಎಂ. ಸಿದ್ಧಮಲ್ಲ ಸ್ವಾಮಿ**, ನಂ. 136/1, ಶ್ರೀ ನೀಲಕಂಠಸ್ವಾಮಿ ಮಠ, ಹರಿಶ್ಚಂದ್ರ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು–570009.
7. **ಶ್ರೀ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ಉಮ್ಮಚಗಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ – 581347
8. **ಡಾ. ಕೆ. ಸುಧಾಕರ್**, ನಂ. 346/347, 'ಪ್ರೇಮವಿಲ್ಲಾ', 14ನೇ ಮುಖ್ಯರಸ್ತೆ, ಆರ್.ಎಂ.ವಿ. ಬಡಾವಣೆ, ಸದಾಶಿವನಗರ, ಬೆಂಗಳೂರು–80.
9. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ರೂಮ್ ನಂ. 145, 1ನೇ ಮಹಡಿ, ವಿಧಾನಸೌಧ, ಬೆಂಗಳೂರು–560001.
10. **ಪ್ರಧಾನ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು–560001
11. **ಅಪರ ಮುಖ್ಯ ಕಾರ್ಯದರ್ಶಿಗಳು**, ಹಣಕಾಸು ಇಲಾಖೆ, ವಿಧಾನಸೌಧ, ಬೆಂಗಳೂರು–560001
12. **ಸರ್ಕಾರದ ಕಾರ್ಯದರ್ಶಿ**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ) ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು–560001
13. **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ–ನೈಋತ್ಯ ಪ್ರಾದೇಶಿಕ ಕೇಂದ್ರ, ಪ್ರಸನ್ನಕುಮಾರ್ ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು–09,
14. **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಅರಮನೆ ಆವರಣ, ಮೈಸೂರು–570001.
15. **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002.
16. **ಆಯುಕ್ತರು**, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001
17. **ನಿರ್ದೇಶಕರು**, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ ಬೆಂಗಳೂರು–560001
18. **ನಿರ್ದೇಶಕರು**, ಪದವಿಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012
19. **ನಿರ್ದೇಶಕರು**, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009
20. **ಆಯುಕ್ತರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001

**ಪ್ರತಿಗಳು:**

1. **ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು**, ರಾಜಭವನ, ಬೆಂಗಳೂರು – 560001
2. **ಮಾನ್ಯ ಕುಲಪತಿಯವರ ಆಪ್ತಶಾಖೆ**, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
3. ಕಛೇರಿ ಪ್ರತಿ
4. ರಕ್ಷತಾ ಪ್ರತಿ
5. ಜಾಲತಾಣಕ್ಕೆ ಅಳವಡಿಸಲು – ತುರ್ತು


ದೂರವಾಣಿ: 080 – 26701303 / 26705387; ಇ-ಮೇಲ್: karnatakasanskrituniversity@gmail.com
दूरवाणी: ०८०-२६७०१३०३; २६७०५३८७; ई-सङ्केतः – karnatakasanskrituniversity@gmail.com

## 03.02.2018ರಂದು ನಡೆದ ಪ್ರಶಾಸನ ಸಮಿತಿ (ಸಿಂಡಿಕೇಟ್) 43ನೇ (ವಿಶೇಷ) ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ 43ನೇ (ವಿಶೇಷ) ಸಭೆಯು** ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ **ಫೆಬ್ರವರಿ 03, 2018ರ ಶನಿವಾರ ಪೂರ್ವಾಹ್ನ 11.00** ಗಂಟೆಗೆ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | |
|---|---|
| ೧. **ಪ್ರೊ. ಪದ್ಮಾಶೇಖರ್**, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. **ಶ್ರೀಮತಿ ಸುಜಾತ ಗೌಡ**, ಬೆಂಗಳೂರು | ಸದಸ್ಯರು |
| ೩. **ಶ್ರೀ ಶಿವಕುಮಾರ್ ಎನ್.**, ಬೆಂಗಳೂರು | ಸದಸ್ಯರು |
| ೪. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ನಿವೃತ್ತ ಅಧ್ಯಾಪಕರು, ರಾಮಪುರ, ರಬಕವಿ | ಸದಸ್ಯರು |
| ೫. **ಶ್ರೀಮತಿ ಜಯಶ್ರೀ ವಿ. ಕೊರತಿ**, ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| ೬. **ವಿದ್ವಾನ್ ಸಿದ್ಧಮಲ್ಲ ಸ್ವಾಮಿ**, ನಿವೃತ್ತ ಪ್ರಾಧ್ಯಾಪಕರು, ಮೈಸೂರು | ಸದಸ್ಯರು |
| ೭. **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ | ಸದಸ್ಯರು |
| ೮. **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು – ಪರವಾಗಿ **ಶ್ರೀಮತಿ ಮಂಜುಳಾ ಸಿ.ಎನ್.**, ಸಹಾಯಕ ನಿರ್ದೇಶಕರು | ಸದಸ್ಯರು |
| ೯. **ನಿರ್ದೇಶಕರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001 – ಪರವಾಗಿ **ಶ್ರೀಮತಿ ಜಾಹ್ನವಿ**, ಹಿರಿಯ ಸಹಾಯಕ ನಿರ್ದೇಶಕರು | ಸದಸ್ಯರು |
| ೧೦.**ಶ್ರೀಮತಿ ಎಂ. ಶಿಲ್ಪ**, ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | |
|---|---|
| ೧. **ಡಾ. ಮೈಕೆಲ್**, ಪ್ರಾಧ್ಯಾಪಕರು ಮತ್ತು ಡೀನ್, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಸದಸ್ಯರು |
| ೨. **ಡಾ. ಕೆ. ಸುಧಾಕರ್**, ಶಾಸಕರು(ಚಿಕ್ಕಬಳ್ಳಾಪುರ), ಬೆಂಗಳೂರು | ಸದಸ್ಯರು |
| ೩. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ಮಾನ್ಯ ವಿಧಾನಪರಿಷತ್ ಸದಸ್ಯರು, ಬೆಂಗಳೂರು | ಸದಸ್ಯರು |
| ೪. **ಪ್ರಧಾನ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೫. **ಅಪರ ಮುಖ್ಯ ಕಾರ್ಯದರ್ಶಿಗಳು**, ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೬. **ಕಾರ್ಯದರ್ಶಿಗಳು**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೭. **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು–09 | ಸದಸ್ಯರು |
| ೮. **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೯. **ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001** | ಸದಸ್ಯರು |
| ೧೦.ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು–560001 | ಸದಸ್ಯರು |
| ೧೧.ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಬೆಂಗಳೂರು–560012 | ಸದಸ್ಯರು |
| ೧೨.ನಿರ್ದೇಶಕರು, **ವೈದ್ಯಕೀಯ ಶಿಕ್ಷಣ** ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009 | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಂಡಿತವಾಗಿ ನಿರ್ಣಯಗೊಂಡವು.

| ವಿ.ಸಂ. | **ವಿಷಯ ಮತ್ತು ಟಿಪ್ಪಣಿ** |
|---|---|
| ವಿಷಯ 01 | **ಪ್ರಶಾಸನ ಸಮಿತಿ 42ನೇ ಸಭೆಯ ಅನುಪಾಲನಾ ವರದಿಯನ್ನು ಅನುಮೋದಿಸುವ ಬಗೆಗೆ.**<br>ಪ್ರಶಾಸನ ಸಮಿತಿ 42ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 19.01.2018ರಂದು ನಡೆಯಿತು. ಸಭೆಯ ನಿರ್ಣಯದಂತೆ ಕೈಗೊಳ್ಳಲಾದ ಅನುಪಾಲನಾ ವರದಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| ನಿರ್ಣಯ | **ಸಭೆಯು ಪ್ರಶಾಸನ ಸಮಿತಿ 42ನೇ ಸಭೆಯ ಅನುಪಾಲನಾ ವರದಿಯನ್ನು ಪರಿಶೀಲಿಸಿ, ಒಪ್ಪಿಗೆಯನ್ನು ನೀಡಿತು.** |

| | |
|---|---|
| ವಿಷಯ 02 | **'ಹಣಕಾಸು ಸಮಿತಿ' 28ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಹಣಕಾಸು ಸಮಿತಿ' 28ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 31.01.2018ರಂದು ನಡೆಯಿತು. ಆ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| ನಿರ್ಣಯ | **ಸಭೆಯು ಹಣಕಾಸು ಸಮಿತಿ 28ನೇ ಸಭೆಯ ನಡಾವಳಿಗಳನ್ನು ಪರಿಶೀಲಿಸಿ, ಒಪ್ಪಿಗೆಯನ್ನು ನೀಡಿತು. ಹಣಕಾಸು ವಿಷಯಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯಕ್ಕೆ ಅಗತ್ಯವಿರುವ ಪರಿನಿಯಮಗಳನ್ನು ರಚಿಸಿಕೊಳ್ಳಲು ಕೆಳಕಂಡ ತಜ್ಞರ ಸಮಿತಿಯನ್ನು ರಚಿಸಲು ಸಭೆಯು ಸೂಚಿಸಿತು.**<br>1. **ಡಾ. ಆರ್.ಆರ್. ಕುಲಕರ್ಣಿ, ನಿವೃತ್ತ ಪ್ರಾಂಶುಪಾಲರು, ಬೆಂಗಳೂರು**<br>2. **ಶ್ರೀ ಯು.ಬಿ. ಉಳವಿ, ನಿವೃತ್ತ ಉಪಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು**<br>3. **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್, ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ** |
| ವಿಷಯ 03 | **ಕುಲಸಚಿವರಿಗೆ ನೂತನ ಕಾರನ್ನು ಖರೀದಿಸುವ ಬಗೆಗೆ.**<br>ದಿನಾಂಕ: 27.10.2017ರಂದು ನಡೆದ ಪ್ರಶಾಸನ ಸಮಿತಿ ನಿರ್ಣಯದಂತೆ, ಕುಲಸಚಿವರು ಬಳಸುತ್ತಿದ್ದ ಕಾರನ್ನು ಮಾರಾಟ ಮಾಡಿ, ನೂತನ ಕಾರನ್ನು ಖರೀದಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಪತ್ರವನ್ನು ಬರೆಯಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 153 ಶಿವಾನೀ 2013, ದಿನಾಂಕ: 21.08.2013 ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಶಿಫಾರಸ್ಸಿನಂತೆ, ಕುಲಸಚಿವರು ಬಳಸುತ್ತಿದ್ದ ಹುಂಡೈ ವರ್ನಾ' (VERNA CRDI VGT SX; Reg. No. KA-01, MF-8175; Model-2010) ಕಾರನ್ನು ಮಾರಾಟ ಮಾಡಲು ದಿನಾಂಕ: 28.12.2017ರಂದು ಹರಾಜು ಪ್ರಕ್ರಿಯೆಯನ್ನು ನಡೆಸಲಾಯಿತು. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನಿಗದಿಪಡಿಸಿದ ಮೊತ್ತ ರೂ. 2,50,000/-ಗಳಿಗೆ ಯಾವ ಬಿಡ್ಡುದಾರರೂ ಕೂಡ ಬಿಡ್ ಮಾಡದ ಕಾರಣ, ಕಾರನ್ನು ವಿಲೇ ಮಾಡದೇ ಹರಾಜು ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗಿತ್ತು. ಅನಂತರ, ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದ ಶ್ರೀ ರಾಜೇಶ್ ಟಿ.ಎಂ., ಇಟ್ಟುಮಡು, ಬೆಂಗಳೂರು –ಇವರು ರೂ. 2,50,100/–ಗಳಿಗೆ ಕಾರನ್ನು ಕೊಂಡುಕೊಳ್ಳಲು ಒಪ್ಪಿಗೆ ಸೂಚಿಸಿದ ಹಿನ್ನೆಲೆಯಲ್ಲಿ, ಇವರಿಂದ ರೂ. 2,50,100/–(ಎರಡು ಲಕ್ಷದ ಐವತ್ತು ಸಾವಿರದ ಒಂದು ನೂರು ಮಾತ್ರ)ಗಳನ್ನು ವಿಶ್ವವಿದ್ಯಾಲಯಕ್ಕೆ ಪಾವತಿಸಿಕೊಂಡು ದಿನಾಂಕ: 03.01.2018ರಂದು ಕಾರನ್ನು ಸದರಿಯವರಿಗೆ ಮಾರಾಟ ಮಾಡಲಾಗಿದೆ. ಈ ಹಿಂದೆ ಕುಲಸಚಿವರ ಬಳಕೆಗೆ ಕಾರನ್ನು ಖರೀದಿಸಲು ಸರ್ಕಾರದಿಂದ ಅನುಮತಿ ಪಡೆದುಕೊಳ್ಳಲಾಗಿತ್ತು. ಪ್ರಸ್ತುತ ಕುಲಸಚಿವರು ಬಳಸುತ್ತಿದ್ದ ಕಾರನ್ನು ಮಾರಾಟ ಮಾಡಿರುವುದರಿಂದ, ಕುಲಸಚಿವರ ಬಳಕೆಗೆ ಕಾರು ಇರುವುದಿಲ್ಲ. ಆದುದರಿಂದ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ನಿಯಮಾನುಸಾರ ನಿಗದಿತ ಮೊತ್ತದೊಳಗೆ ಹೊಸ ಕಾರನ್ನು ಖರೀದಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ವಿಷಯವನ್ನು ಮಂಡಿಸಿದೆ. |
| ನಿರ್ಣಯ | **ಕುಲಸಚಿವರ ಬಳಕೆಗೆ ನಿಯಮಾನುಸಾರ ಹೊಸ ಕಾರು ಖರೀದಿಸಲು ಸಭೆಯು ಒಪ್ಪಿಗೆಯನ್ನು ನೀಡಿತು.** |
| ವಿಷಯ 04 | **ಪ್ರೊ. ಅಭಿಜಿತ್ ಜೋಷಿ, ತಿಲಕ ಮಹಾರಾಷ್ಟ್ರ ವಿದ್ಯಾಪೀಠ, ಪುಣೆ –ಇವರಿಗೆ ಡಿ.ಲಿಟ್ ಪದವಿ ನೀಡುವ ಬಗೆಗೆ.**<br>ದಿನಾಂಕ: 22.12.2017ರಂದು ನಡೆದ ಪ್ರಶಾಸನ ಸಮಿತಿ 41ನೇ ಸಭೆಯ ನಿರ್ಣಯದಂತೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಡಿ.ಲಿಟ್ ಪದವಿಗಾಗಿ ಪ್ರೊ. ಅಭಿಜಿತ್ ಜೋಷಿ ಅವರು 'ದೈವವ್ಯಪಾಶ್ರಯಚಿಕಿತ್ಸಾ' ಎಂಬ ಶೋಧಪ್ರಬಂಧವನ್ನು ಸಂಸ್ಕೃತ ಭಾಷೆಯಲ್ಲಿ ಸಿದ್ಧಪಡಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ್ದರು. ಈ ಶೋಧಪ್ರಬಂಧವನ್ನು ಮೂವರು ಬಾಹ್ಯತಜ್ಞರಿಗೆ ಮೌಲ್ಯಮಾಪನಕ್ಕೆ ಕಳುಹಿಸಿಕೊಡಲಾಗಿತ್ತು. ಬಾಹ್ಯತಜ್ಞರು ಈ ಶೋಧಪ್ರಬಂಧವು ಡಿ.ಲಿಟ್ ಪದವಿ ನೀಡಲು ಯೋಗ್ಯವಾದುದೆಂದು ವರದಿಯನ್ನು ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ, ದಿನಾಂಕ: 01.02.2018ರಂದು ಭಾಷಾನಿಕಾಯ, ಶಾಸ್ತ್ರನಿಕಾಯ ಹಾಗೂ ವೇದಾಂತನಿಕಾಯಗಳ ಡೀನರ ಸಮಿತಿಯು ಸಭೆಯನ್ನು ನಡೆಸಿ ಡಿ.ಲಿಟ್ ಪದವಿ ನೀಡಲು ಶಿಫಾರಸ್ಸು ಮಾಡಿರುತ್ತದೆ. ಅಲ್ಲದೇ, ಬಾಹ್ಯ ಹಾಗೂ ಆಂತರಿಕ ವಿಷಯತಜ್ಞರು ಈ ಶೋಧಪ್ರಬಂಧದ ಕುರಿತು ಶೈಕ್ಷಣಿಕ ಸಂವಾದವನ್ನು ನಡೆಸಿ, ಈ ಶೋಧಪ್ರಬಂಧಕ್ಕೆ ಡಿ.ಲಿಟ್ ಪದವಿಯನ್ನು ನೀಡಲು ಶಿಫಾರಸ್ಸು ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವ ಸಮಾರಂಭದಲ್ಲಿ ಪ್ರೊ. ಅಭಿಜಿತ್ ಜೋಷಿ ಅವರಿಗೆ ಡಿ.ಲಿಟ್ ಪದವಿ ನೀಡಲು ಸಭೆಯ ಅನುಮೋದನೆಗಾಗಿ ಮಂಡಿಸಿದೆ. |
| ನಿರ್ಣಯ | **ಸಭೆಯು ಪ್ರೊ. ಅಭಿಜಿತ್ ಜೋಷಿ ಅವರ 'ದೈವವ್ಯಪಾಶ್ರಯಚಿಕಿತ್ಸಾ' ಶೋಧಪ್ರಬಂಧಕ್ಕೆ ವಿಶ್ವವಿದ್ಯಾಲಯದ ಡಿ.ಲಿಟ್ ಪದವಿ ನೀಡಲು ಒಪ್ಪಿಗೆಯನ್ನು ನೀಡಿತು.** |

**ವಿಷಯ 05** — **ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸುವ ಬಗೆಗೆ.**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ದಿನಾಂಕ: 20.02.2018ರ ಮಂಗಳವಾರ ನಡೆಸಲು ಘನತೆವೆತ್ತ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳು ದಿನಾಂಕವನ್ನು ನಿಗದಿಪಡಿಸಿ ಒಪ್ಪಿಗೆಯನ್ನು ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ, ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸಲು ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಪ್ರಶಾಸನ ಸಮಿತಿಯ ಅವಗಾಹನೆಗಾಗಿ ವಿಷಯವನ್ನು ಮಂಡಿಸಿದೆ.

**ನಿರ್ಣಯ** — **ಸಭೆಯು ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸುತ್ತಿರುವುದಕ್ಕೆ ಒಪ್ಪಿಗೆಯನ್ನು ನೀಡಿತು.**

**ವಿಷಯ 06** — **ಯುಜಿಸಿ ವೇತನಶ್ರೇಣಿಯ ಬೋಧಕ – ಸಹಾಯಕ ಪ್ರಾಧ್ಯಾಪಕ ಹುದ್ದೆಗಳ ನೇಮಕಾತಿಯನ್ನು ಅನುಮೋದಿಸುವ ಬಗೆಗೆ.**

ದಿನಾಂಕ: 16.03.2016ರಂದು ನಡೆದ ಪ್ರಶಾಸನ ಸಮಿತಿ 32ನೇ ಸಭೆಯ ನಿರ್ಣಯದಂತೆ ಯುಜಿಸಿ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗೆ ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್ಇ 2017; ದಿನಾಂಕ: 17.07.2017ರ ಮಾರ್ಗಸೂಚಿ ಹಾಗೂ UGC Regulations 2016 ಅನ್ವಯ ಕ್ರಮವಹಿಸಲು ಸರ್ಕಾರವು ಸೂಚಿಸಿದ ಹಿನ್ನೆಲೆಯಲ್ಲಿ, ಯುಜಿಸಿ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ಮರುಅಧಿಸೂಚನೆಯನ್ನು ಹೊರಡಿಸಿ, ದಿನಾಂಕ: 27.10.2017ರಂದು ನಡೆದ ಪ್ರಶಾಸನ ಸಮಿತಿ 40ನೇ ಸಭೆಯಲ್ಲಿ ಅನುಮೋದನೆಯನ್ನು ಪಡೆಯಲಾಗಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್ಇ 2017; ದಿನಾಂಕ: 17.07.2017ರ ಮಾರ್ಗಸೂಚಿಯನ್ವಯ ಯುಜಿಸಿ ವೇತನಶ್ರೇಣಿಯ ಬೋಧಕ (ಸಹಾಯಕ ಪ್ರಾಧ್ಯಾಪಕ) ಹುದ್ದೆಗಳ ನೇಮಕಾತಿಗಾಗಿ ದಿನಾಂಕ: 22.01.2018ರಂದು ಲಿಖಿತ ಪರೀಕ್ಷೆಯನ್ನು ನಡೆಸಲಾಗಿದೆ. ಲಿಖಿತ ಪರೀಕ್ಷೆಯ ಮೆರಿಟ್ ಮತ್ತು ಮೀಸಲಾತಿ ನಿಯಮಗಳನ್ವಯ ದಿನಾಂಕ: 02.02.2018 ರಂದು ಈ ಹುದ್ದೆಗಳ ನೇಮಕಾತಿಗಾಗಿ 'ಆಯ್ಕೆ ಸಮಿತಿ' ಸಂದರ್ಶನವನ್ನು ನಡೆಸಲಾಯಿತು. 'ಆಯ್ಕೆ ಸಮಿತಿ' ಶಿಫಾರಸ್ಸುಗಳನ್ವಯ ಆಯಾ ವಿಭಾಗಗಳಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ.

**ನಿರ್ಣಯ** — **ಸಭೆಯ ಮುಂದೆ ಯುಜಿಸಿ ವೇತನಶ್ರೇಣಿಯ ಬೋಧಕ 'ಸಹಾಯಕ ಪ್ರಾಧ್ಯಾಪಕ' ಹುದ್ದೆಗಳಿಗೆ 2018ರ ಫೆಬ್ರವರಿ 02ರಂದು ನಡೆದ 'ಆಯ್ಕೆ ಸಮಿತಿ' ಸಭೆಯ ಶಿಫಾರಸ್ಸುಗಳನ್ನು ಮಾನ್ಯ ಕುಲಪತಿಗಳು ಮಂಡಿಸಿದರು. ಒಂದೊಂದು ವಿಭಾಗಗಳಿಗೆ ಯೋಜನೆ, ಸಂಶೋಧನೆ ಮತ್ತು ಬೋಧನೆ –ಇವುಗಳಿಗೆ ಅನುಗುಣವಾಗಿ ಅರ್ಹರಾದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಹೊರಡಿಸಿದ ಅಧಿಸೂಚನೆಗಳ ಅನ್ವಯ ಹಾಗೂ ಘನತೆವೆತ್ತ ರಾಜ್ಯಪಾಲರಿಂದ ಅನುಮೋದನೆಗೊಂಡ 'Amendments to the existing Statute Governing the Appointment of Professors, Associate Professors, Assistant Professors and Librarians & conduct of Interview of Teaching, Academic Staff & Other Allied posts under section 38(II) of the Karnataka Samskrit University Act, 2009' (ಸಂಖ್ಯೆ: ಇಡಿ 384 ಯುಎನ್ಇ 2017; ದಿನಾಂಕ: 10.01.2018)ರಲ್ಲಿರುವ ಎಲ್ಲಾ ನಿಯಮಗಳನ್ನು ಸಭೆಯ ಮುಂದೆ ಮಾನ್ಯ ಕುಲಪತಿಗಳು ಮಂಡಿಸಿದರು. ಪ್ರಶಾಸನ ಸಮಿತಿಯು ಸಂಪೂರ್ಣವಾಗಿ ಎಲ್ಲ ವಿವರಗಳನ್ನು ಪರಿಶೀಲಿಸಿತು. ಆಯಾಯ ಹುದ್ದೆಗಳಿಗೆ ಬೇಕಾಗುವ ಶೈಕ್ಷಣಿಕ ಅರ್ಹತೆ, ಸಂಶೋಧನಾ ಅನುಭವ ಹಾಗೂ ಇತರೆ ಅರ್ಹತೆಗಳನ್ನು ಕ್ರಮಾನುಸಾರವಾಗಿ ಪರಿಗಣಿಸಿ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಸಭೆ ತನ್ನ ಅನುಮೋದನೆಯನ್ನು ನೀಡಿತು.**

| ಕ್ರಸಂ. | ವಿಭಾಗ | ಆಯ್ಕೆಗೊಂಡ ಅಭ್ಯರ್ಥಿಗಳು | ಮೀಸಲಾತಿ |
|---|---|---|---|
| 01. | ಸಂಸ್ಕೃತ ಭಾಷೆ ಮತ್ತು ಸಾಹಿತ್ಯ | **ಡಾ. ಜಯರೇವಣ್ಣ ಎಂ.ವಿ.**<br>S/o. ವೆಂಕಟೇಶ್<br># 1784/ಸಿ, 23ನೇ ಅಡ್ಡರಸ್ತೆ, ದೀಪಾ ಕಾಲೇಜು ರಸ್ತೆ,<br>ರೂಪನಗರ, ಮೈಸೂರು–570026. | 2ಎ |
| 02. | ಹಸ್ತಪ್ರತಿಶಾಸ್ತ್ರ | **ರಾಮಕೃಷ್ಣ ಭಟ್ ಕೆ.**<br># 166/ಎ, ನೆಲಮಹಡಿ, ಮೊದಲನೇ ಮನೆ,<br>13ನೇ ಅಡ್ಡರಸ್ತೆ, ಗಿರಿನಗರ 3ನೇ ಹಂತ,<br>ಬೆಂಗಳೂರು–560085. | ಸಾಮಾನ್ಯ |

| | | | |
|---|---|---|---|
| 03. | ಹಸ್ತಪ್ರತಿಶಾಸ್ತ್ರ | **ಪ್ರಭುಸ್ವಾಮಿ ಎಸ್.**<br>S/o. ಸುಂದರಯ್ಯ<br># 133, ಶ್ರೀ ಕುಂದೂರು ಮಠ, ಫೋರ್ಟ್ ಮೊಹಲ್ಲಾ<br>ಮೈಸೂರು–570008. | 3ಬಿ |
| 04. | ನ್ಯಾಯ ಮತ್ತು ವೈಶೇಷಿಕ | **ವಿ.ಎಸ್.ಆರ್. ಲಕ್ಷ್ಮೀ ವೇಲುವರತಿ**<br>C/o. ಎ.ವಿ. ಕಿರಣ್, 6–9–S2–5,<br>ಆರ್.ಎಸ್. ಗಾರ್ಡನ್ಸ್, ಚಿತ್ತೂರು<br>ತಿರುಪತಿ–517501 (ಆಂಧ್ರಪ್ರದೇಶ) | ಸಾಮಾನ್ಯ |
| 05. | ನ್ಯಾಯ ಮತ್ತು ವೈಶೇಷಿಕ | **ಶ್ರೀವೆಂಕಟನಾಥನ್ ಕೆ.ಇ.**<br>6–8–1139, ಎನ್60 ಕಾಲೋನಿ<br>ತಿರುಪತಿ–517507 (ಆಂಧ್ರ ಪ್ರದೇಶ) | ಸಾಮಾನ್ಯ |
| 06. | ಅಲಂಕಾರಶಾಸ್ತ್ರ | **ವನರಾಜ ಬಿ.ಕೆ.**<br>S/o. ಕೆಂಪಯ್ಯ<br>ಸಿ.ಎನ್.ಎಸ್. ಎಕ್ಸ್‌ಟೆನ್ಷನ್, ಆದಿಚುಂಚನಗಿರಿ<br>ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ – 571811 | 3ಎ |
| 07. | ಅಲಂಕಾರಶಾಸ್ತ್ರ | **ಭೀಮ ನಾಯ್ಕ್ ಎಸ್.**<br>S/o. ಸೋಮಲ ನಾಯ್ಕ್<br>ರಾಮ್‌ಜೀಹಟ್ಟಿ (ವಿ.) ಬುಡ್ನಹಟ್ಟಿ ಪೋಸ್ಟ್<br>ಚಳ್ಳಕೆರೆ (ತಾ), ಚಿತ್ರದುರ್ಗ ಜಿಲ್ಲೆ – 577543 | ಪ.ಜಾ. |

ಹೈದರಾಬಾದ್–ಕರ್ನಾಟಕ(ಪ.ಜಾ.) ಹಾಗೂ ಪ್ರವರ್ಗ 2ಬಿ(ಬ್ಯಾಕ್‌ಲಾಗ್) –ಈ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿರುವ ಹಿನ್ನೆಲೆಯಲ್ಲಿ ಮತ್ತೊಮ್ಮೆ ಅಧಿಸೂಚನೆಯನ್ನು ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ನಿಯಮಾನುಸಾರ ಕ್ರಮಕೈಗೊಳ್ಳಬಹುದೆಂದು ಸಭೆ ಸೂಚಿಸಿತು. ನೇಮಕಾತಿ ಹೊಂದಿರುವವರು ನೇಮಕಾತಿ ಆದೇಶ ಹೊರಡಿಸಿದ ಒಂದು ವಾರದ ಒಳಗೆ ಕರ್ತವ್ಯಕ್ಕೆ ಹಾಜರಾಗಲು ಸಭೆಯು ಸೂಚಿಸಿತು. ಸಂವಿಧಾನ 371(ಜೆ) ಅಡಿಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದವರಿಗೆ ಮೀಸಲಿರಿಸಿರುವ ಯುಜಿಸಿ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗೆ ಅಧಿಸೂಚನೆಯನ್ನು ಹೊರಡಿಸಲು ಸಭೆಯು ಒಪ್ಪಿಗೆಯನ್ನು ನೀಡಿತು.

ಅದೇ ಸಂದರ್ಭದಲ್ಲಿ, ಯೋಜನಾ ಸಹಾಯಕ(ಶೈಕ್ಷಣಿಕ) ಹುದ್ದೆಗೆ ನೇಮಕಾತಿ ಹೊಂದಿದ್ದ ಡಾ. ಅರ್ಚನಾ ಕಾರಂತ್ (ಸಾಮಾನ್ಯ) ಅವರು ಕರ್ತವ್ಯಕ್ಕೆ ಹಾಜರಾಗದೇ ಇರುವುದರಿಂದ ಆ ಹುದ್ದೆಯನ್ನೂ ಒಳಗೊಂಡಂತೆ, ಈ ಹಿಂದೆ ಅಧಿಸೂಚನೆಯನ್ನು ಹೊರಡಿಸಿ ಸೂಕ್ತ ಅಭ್ಯರ್ಥಿಗಳು ಇಲ್ಲದೇ ಇರುವುದರಿಂದ ಖಾಲಿ ಉಳಿದಿರುವ ಎಲ್ಲಾ ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ಮತ್ತೊಮ್ಮೆ ಅಧಿಸೂಚನೆಯನ್ನು ಹೊರಡಿಸಲು ಸಭೆಯು ಒಮ್ಮತದಿಂದ ಒಪ್ಪಿಗೆ ಸೂಚಿಸಿತು.

Shilpa
ಶ್ರೀಮತಿ ಎಂ. ಶಿಲ್ಪ, ಕೆ.ಎ.ಎಸ್.
ಸದಸ್ಯ ಕಾರ್ಯದರ್ಶಿ

ಪ್ರೊ. ಪದ್ಮಾಶೇಖರ್.
ಅಧ್ಯಕ್ಷರು